ಅವೇ ಮನಾಪಲೈಸ್ ಆಗಿದೆ. ಈಗ ಎಲ್ಲರ ಗಮನ ಇಂಜಿನಿಯರಿಂಗ್ ಕಾಲೇಜ್, ಮೆಡಿಕಲ್ ಕಾಲೇಜ್ ಕಡೆಗೆ ಇದೆ. ಜನರಲ್ ಯೂನಿವರ್ಸಿಟಿಗಳನ್ನು ಕೇಳುವವರೇ ದಿಕ್ಕಿಲ್ಲ. ಅದಕ್ಕೆ ಹಣವೂ ಇಲ್ಲ, ಏನೂ ಇಲ್ಲ...

ಶ್ರೀ ಜೆ.ಹೆಚ್. ಪಟೇಲ್ : ಇದನ್ನು ಪುನರ್ ಪರಿಶೀಲನೆ ಮಾಡೋಣ.

ಅಧ್ಯಕ್ಷರು : ಸರ್ಕಾರ ಇದನ್ನು ಪುನರ್ ಪರಿಶೀಲನೆ ಮಾಡತಕ್ಕಂಥ ಮಾತನ್ನು ಹೇಳಿದ್ದಾರೆ.

ಶ್ರೀ ಮಲ್ಲಿಕಾರ್ಜುನ ಖರ್ಗೆ : ಇದನ್ನು ಮರುವಿಚಾರ ಮಾಡಿ ಎಂದೇ ನಾವು ಕೇಳುತ್ತಿರುವುದು.

ಶ್ರೀಮತಿ ಪ್ರಮೀಳಾ ನೇಸರ್ಗಿ : ಯೂನಿವರ್ಸಿಟಿ ಫಾರ್ ವಿಮನ್ ಎಂದು ಮಾಡಬೇಕಾಗುತ್ತದೆ. ಇದು ಮಹಾರಾಷ್ಟ್ರ ಮತ್ತು ಡೆಲ್ಲಿಯಲ್ಲಿದೆ. ಇಲ್ಲೂ ಕೂಡ ಏಕೆ ಬರಬಾರದು?

7.50 ಪಿ.ಎಂ

ಶ್ರೀ ಮಾಟಾಳ್ ನಾಗರಾಜ್ : ಈಗ ಮಹಿಳೆಯರ ವಿಶ್ವವಿದ್ಯಾನಿಲಯ ಮಾಡಿ ಏನು ಮಾಡಬೇಕು ಅಂತ ಸ್ವಲ್ಪ ಹೇಳಿ.

ಶ್ರೀಮತಿ ಪ್ರಮೀಳಾ ನೇಸರ್ಗಿ : ಏನು ಮಾಡಬಾರದು?

(ಗೊಂದಲ)

ಅಧ್ಯಕ್ಷರು : ಮಾನ್ಯ ಮೊಹಿದ್ದೀನ್‌ರವರೇ, ಇದನ್ನು ಸನ್ಮಾನ್ಯ ಸಭಾನಾಯಕರು ಸೋಮವಾರ ತೆಗೆದುಕೊಳ್ಳೋಣ ಎಂದು ಹೇಳಿದ್ದಾರೆ. ಆದ್ದರಿಂದ ಮುಂದಿನದ್ದಕ್ಕೆ ಹೋಗೋಣ.

## ಕನ್ನಡ ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕ, 1999 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎ. ಮೊಹಿದ್ದೀನ್ (ಉನ್ನತ ಶಿಕ್ಷಣ ಮಂತ್ರಿ) : ಮಾನ್ಯ ಅಧ್ಯಕ್ಷರೇ, "ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ನೇ ಸಾಲಿನ ಕನ್ನಡ ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ".

*ಪ್ರಸ್ತಾವ ಮಂಡಿಸಲ್ಪಟ್ಟಿತ್ತು*

ಶ್ರೀ ಬಿ.ಎ. ಮೊಹಿದ್ದೀನ್ (ಉನ್ನತ ಶಿಕ್ಷಣ ಮಂತ್ರಿ) : ಮಾನ್ಯ ಅಧ್ಯಕ್ಷರೇ, ಕನ್ನಡ ಯೂನಿವರ್ಸಿಟಿ ಆಕ್ಟ್‌ನಲ್ಲಿ ಕರ್ನಾಟಕದ ಮುಖ್ಯಮಂತ್ರಿಯವರು ಎಂಬ ಪದಗಳಿಗೆ ಬದಲಾಗಿ 'ಕರ್ನಾಟಕದ ರಾಜ್ಯಪಾಲರು' ಎಂದು ಬದಲಾವಣೆ ಮಾಡಲಾಗಿದೆ. ಇದನ್ನು ಯು.ಜಿ.ಸಿ. ನಿಯಮಾವಳಿಗಳ ಅಡಿಯಲ್ಲಿ ತರುವುದರಿಂದ ನಮಗೆ ಯು.ಜಿ.ಸಿ. ಯಿಂದ ಅನುದಾನ ಸಿಗಬಹುದು ಎನ್ನತಕ್ಕಂಥ ಉದ್ದೇಶದಿಂದ ಈ ಒಂದು ತಿದ್ದುಪಡಿಯನ್ನು ತಂದಿದ್ದೇವೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ-

"ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ನೇ ಸಾಲಿನ ಕನ್ನಡ ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

*ಪ್ರಸ್ತಾವ ಅಂಗೀಕರಿಸಲ್ಪಟ್ಟಿತು*

ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2ರಿಂದ 4ರವರೆಗೆ ಎರಡೂ ಸೇರಿದಂತೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, " ಖಂಡ 2 ರಿಂದ 4ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ".

*ಪ್ರಸ್ತಾವ ಅಂಗೀಕರಿಸಲ್ಪಟ್ಟಿತು*

(ಖಂಡ 2 ರಿಂದ 4ರವರೆಗೆ, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ - "ಮೊದಲನೆಯ ಖಂಡ, ದೀರ್ಘ್ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

*ಪ್ರಸ್ತಾವ ಅಂಗೀಕರಿಸಲ್ಪಟ್ಟಿತು*

"ಮೊದಲನೆಯ ಖಂಡ, ದೀರ್ಘ್ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು".

*ಪ್ರಸ್ತಾವದ ಅಂಗೀಕಾರ*

ಶ್ರೀ ಬಿ.ಎ. ಮೊಹಿದ್ದೀನ್ (ಉನ್ನತ ಶಿಕ್ಷಣ ಮಂತ್ರಿ) : ಮಾನ್ಯ ಅಧ್ಯಕ್ಷರೇ, "ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ನೇ ಸಾಲಿನ ಕನ್ನಡ ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ-

"ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ನೇ ಸಾಲಿನ ಕನ್ನಡ ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಅಧ್ಯಕ್ಷರು : ಮುಂದಿನದ್ದು 'ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯಕ್ಕೆ ಸಂಬಂಧಪಟ್ಟಿದ್ದು....